ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

4

ಶಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಸಚಿವಾಲಯ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE 3/7/2020

3 ವಾರದೊಳಗೆ ಎಸ್. ಮೂರ್ತಿ ಮರು ನೇಮಕ: ಹೈಕೋರ್ಟ್

ರಮೇಶಕುಮಾರ್ ಸ್ಪೀಕರ್ ಆಗಿದ್ದಾಗ ಸಸ್ಪೆಂಡಾಗಿದ್ದ ಮೂರ್ತಿ

ಬೆಂಗಳೂರು: ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ಎಸ್. ಮೂರ್ತಿ ಅವರನ್ನು ಅಮಾನತುಗೊಳಿಸಿ, ವಿಧಾನಸಭೆ ವಿಶೇಷ ಮಂಡಳಿ ಹೊರಡಿಸಿರುವ ಆದೇಶ [illegible] ಮೂರು ವಾರದೊಳಗೆ ಅವರನ್ನು ಮರು ನೇಮಕ ಮಾಡಬೇಕು ಎಂದು ಹೈಕೋರ್ಟ್ ಆದೇಶಿಸಿದೆ. ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ತಮ್ಮನ್ನು ಅಮಾನತುಗೊಳಿಸಿದ ವಿಧಾನಸಭೆ ವಿಶೇಷ ಮಂಡಳಿಯ ಆದೇಶ ರದ್ದುಪಡಿಸುವಂತೆ ಕೋರಿ ಎಸ್. ಮೂರ್ತಿ ಸಲ್ಲಿಸಿದ್ದ ತಕರಾರು ಅರ್ಜಿಯ ತೀರ್ಪನ್ನು ನ್ಯಾಯಮೂರ್ತಿ ಪಿ.ಬಿ. ಭಜಂತ್ರಿ ಅವರು ಗುರುವಾರ ಪ್ರಕಟಿಸಿದರು.

ಸಾರ್ವತ್ರಿಕ ನೌಕರರನ್ನು ಅಮಾನತುಗೊಳಿಸಿದ ಮೂರು ತಿಂಗಳ ಒಳಗೆ ಅವರ ವಿರುದ್ಧದ ಆರೋಪಗಳ ತನಿಖೆ ಪೂರ್ಣಗೊಳಿಸಬೇಕು. ಗರಿಷ್ಠ ಎಂದರೆ ಆರು ತಿಂಗಳಲ್ಲಿ ತನಿಖೆ ಮಾಡದಿದ್ದರೆ, ಅವರನ್ನು ಸೇವೆಗೆ ಮರು ನೇಮಕ ಮಾಡಬೇಕು. ಈ ಪ್ರಕರಣದಲ್ಲಿ ಒಂದೂವರೆ ವರ್ಷ ಕಳೆದರೂ ತನಿಖೆ ಪೂರ್ಣಗೊಂಡಿಲ್ಲ, ಮುಂದಿನ [illegible] ತೀರ್ಪಿನಲ್ಲಿ ಉಲ್ಲೇಖಿಸಿ ಈ ಆದೇಶ ಹೊರಡಿಸಲಾಗಿದೆ. ಹಣ ದುರುಪಯೋಗದ ಆರೋಪದ ಮೇಲೆ ಎಸ್. ಮೂರ್ತಿಯವರನ್ನು ರಮೇಶ್ ಕುಮಾರ್ ಸ್ಪೀಕರ್ ಆಗಿದ್ದ ವೇಳೆ ಸೇವೆಯಿಂದ ಅಮಾನತುಗೊಳಿಸಿ ವಿಧಾನಸಭೆ ಅಧೀನ ಕಾರ್ಯದರ್ಶಿ 2018ರ ಡಿಸೆಂಬರ್ 27ರಂದು ಆದೇಶ ಹೊರಡಿಸಿದ್ದರು. ಸದ್ಯ ಮೂರ್ತಿ ಸಾರ್ವತ್ರಿಕ ಸೇವೆಯಿಂದ ನಿವೃತ್ತರಾಗಿದ್ದಾರೆ.